ಕರ್ನಾಟಕ ಸರ್ಕಾರ
ವಿಭಾಗೀಯ ಕಾರ್ಯದರ್ಶಿಗಳು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಹಾಗೂ ಪದನಿಮಿತ್ತ ಜಂಟಿನಿರ್ದೇಶಕರ ಕಛೇರಿ,
ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ, ಡಿ. ಸುಬ್ಬಯ್ಯ ರಸ್ತೆ, ಮೈಸೂರು-570 024.
ಇ-ಮೇಲ್: jdpi.edu.karmys@nic.in ದೂರವಾಣಿ ಸಂಖ್ಯೆ: 0821-2422208

*****************************************************************************************************************

ಸಂಖ್ಯೆ: ಸನಿಮೈ/ಆಶಾ/ಉತ್ತಮ ಶಾಲಾ ಪ್ರಶಸ್ತಿ /2018-19 ದಿನಾಂಕ : 27-04-2018

## ಜ್ಞಾಪನ

ವಿಷಯ : 2017-18ನೇ ಸಾಲಿನಲ್ಲಿ ಮಾಜಿ ಶಿಕ್ಷಣ ಸಚಿವರಾದ ದಿವಂಗತ ಶ್ರೀ ಹೆಚ್. ಜಿ. ಗೋವಿಂದೇಗೌಡ ರವರ ಹೆಸರಿನಲ್ಲಿ ಶಿಕ್ಷಕರ ದಿನಾಚರಣೆಯಂದು ಒಂದು ಅತ್ಯುತ್ತಮ ಕನ್ನಡ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮತ್ತು ಪ್ರೌಢಶಾಲೆಗೆ ಪ್ರಶಸ್ತಿಯನ್ನು ನೀಡುವ ಬಗ್ಗೆ.

ಉಲ್ಲೇಖ : ಮಾನ್ಯ ನಿರ್ದೇಶಕರು (ಪ್ರೌಶಿ), ಆಯುಕ್ತರ ಕಛೇರಿ, ಸಾಶಿಇ, ಬೆಂಗಳೂರು ರವರ ಪತ್ರ ಸಂಖ್ಯೆ : ಸಿ4(3)/ಉತ್ತಮ ಪ್ರಶಸ್ತಿ 01/2018-19 ದಿ: 05-04-2018

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2017-18ನೇ ಸಾಲಿನಲ್ಲಿ ಮಾಜಿ ಶಿಕ್ಷಣ ಸಚಿವರಾದ ದಿವಂಗತ ಶ್ರೀ ಹೆಚ್. ಜಿ. ಗೋವಿಂದೇಗೌಡ ರವರ ಹೆಸರಿನಲ್ಲಿ ಮೈಸೂರು ವಿಭಾಗದ ಒಂದು ಅತ್ಯುತ್ತಮ ಕನ್ನಡ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮತ್ತು ಒಂದು ಕನ್ನಡ ಮಾಧ್ಯಮ ಪ್ರೌಢಶಾಲೆಗೆ ದಿನಾಂಕ : 05-09-2018 ರಂದು ನಡೆಯಲಿರುವ ಶಿಕ್ಷಕ ದಿನಾಚರಣೆಯಂದು ಪ್ರಶಸ್ತಿ ನೀಡಲು ಅರ್ಹ ಶಾಲೆಗಳ ಪ್ರಸ್ತಾವನೆಯನ್ನು ಮುಖ್ಯೋಪಾಧ್ಯಾಯರುಗಳಿಂದ ಪಡೆದು ಸಲ್ಲಿಸುವಂತೆ ಉಲ್ಲೇಖಿತ ಪತ್ರದಲ್ಲಿ ಸೂಚಿಸಿರುತ್ತಾರೆ. (ಪ್ರತಿಯನ್ನು ಕಛೇರಿಯ ಇ-ಮೇಲ್ ವಿಳಾಸಕ್ಕೆ ಕಳುಹಿಸಲಾಗಿದೆ)

ಈ ಸಂಬಂಧ ನಿಮ್ಮ ಜಿಲ್ಲಾ ವ್ಯಾಪ್ತಿಯ ಸ್ಥಳೀಯ ದಿನಪತ್ರಿಕೆಗಳಲ್ಲಿ ಪ್ರಚಾರ ಮಾಡಿ, ತಾಲ್ಲೂಕು ಮಟ್ಟದಲ್ಲಿ ಸಮಿತಿಯನ್ನು ರಚಿಸಿ, ನಿಗದಿತ ಸಮಯದಲ್ಲಿ ಪ್ರಸ್ತಾವನೆಯನ್ನು ಪಡೆದು, ನಿಮ್ಮವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಜಿಲ್ಲಾಮಟ್ಟಕ್ಕೆ ದಿನಾಂಕ : 20-06-2018ರೊಳಗೆ ಸಲ್ಲಿಸಲು ಅಗತ್ಯ ಕ್ರಮವಹಿಸುವುದು.

ಜಿಲ್ಲಾ ಮಟ್ಟದ ಸಮಿತಿಯನ್ನು ರಚಿಸಿ ಪ್ರತೀ ತಾಲ್ಲೂಕಿನಿಂದ ಬಂದ ಅತ್ಯುತ್ತಮ ಶಾಲೆಗಳ ಪಟ್ಟಿಯನ್ನು ಜಿಲ್ಲಾಮಟ್ಟದಲ್ಲಿ ಪರಿಶೀಲಿಸಿ ಜಿಲ್ಲಾಮಟ್ಟದಲ್ಲಿ ಒಂದು ಒಂದು ಅತ್ಯುತ್ತಮ ಕನ್ನಡ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮತ್ತು ಒಂದು ಕನ್ನಡ ಮಾಧ್ಯಮ ಪ್ರೌಢಶಾಲೆಯನ್ನು ಆಯ್ಕೆ ಮಾಡಿ ಜಿಲ್ಲಾ ಉಪನಿರ್ದೇಶಕರು ದೃಢೀಕರಿಸಿ ತಮ್ಮ ಅಭಿಪ್ರಾಯದೊಂದಿಗೆ ದಿನಾಂಕ : 25-06-2018ರೊಳಗೆ ಮಾನ್ಯ ನಿರ್ದೇಶಕರು (ಪ್ರೌಶಿ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಒಂದು ಪ್ರತಿಯನ್ನು ಸಲ್ಲಿಸಿ ಮತ್ತೊಂದು ಪ್ರತಿಯನ್ನು ಈ ಕಛೇರಿಗೆ ಸಲ್ಲಿಸಲು ತಿಳಿಸಿದೆ.

(ಶೇಖರ)
ವಿಭಾಗೀಯ ಕಾರ್ಯದರ್ಶಿಗಳು
ಹಾಗೂ ಪದನಿಮಿತ್ತ ಜಂಟಿನಿರ್ದೇಶಕರು
ಸಾರ್ವಜನಿಕ ಶಿಕ್ಷಣ ಇಲಾಖೆ,
ಮೈಸೂರು ವಿಭಾಗ, ಮೈಸೂರು

27/4/18

ಗೆ,

1. ಉಪನಿರ್ದೇಶಕರು (ಆಡಳಿತ)/ಮೈಸೂರು/ಮಂಡ್ಯ/ಹಾಸನ/ಚಿಕ್ಕಮಂಗಳೂರು/ಚಾಮರಾಜನಗರ/ದಕ್ಷಿಣ ಕನ್ನಡ/ಕೊಡಗು/ಉಡುಪಿ ರವರುಗಳಿಗೆ ಅಗತ್ಯ ಕ್ರಮಕ್ಕಾಗಿ